# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೀನುಗಾರಿಕೆ ಕ್ಷೇತ್ರಪಾಲಕರಿಗೆ 25 ಮತ್ತು 30 ವರ್ಷಗಳ ಸೇವೆಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರಾತಿಯಲ್ಲಿ ಕನ್ನಡ ಭಾಷಾ ಪರೀಕ್ಷೆ ಮತ್ತು ಇಲಾಖಾ ಪರೀಕ್ಷೆ ಉತ್ತೀರ್ಣತೆಯಿಂದ ವಿನಾಯಿತಿ ನೀಡುವ ಕುರಿತು.

**ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2012(VIII), ದಿನಾಂಕ:14 ನೇ ಜೂನ್ 2012**

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:14.06.2012 ರ ಸರ್ಕಾರಿ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 6(ii) ರಲ್ಲಿ ನಮೂದಿಸಲಾಗಿರುವ ನೌಕರರನ್ನು ಹೊರತುಪಡಿಸಿ ರಾಜ್ಯ ವೇತನ ಶ್ರೇಣಿಗಳ ಮೊದಲ 15 ವೇತನ ಶ್ರೇಣಿಗಳಲ್ಲಿರುವ ಯಾವುದೇ ಒಂದು ಹುದ್ದೆಯಲ್ಲಿ ಇಪ್ಪತ್ತೈದು ವರ್ಷ ಅಥವಾ ಮೂವತ್ತು ವರ್ಷಗಳ ಕಾಲ ಒಂದೂ ಪದೋನ್ನತಿ ಪಡೆಯದೆ ಮುಂದುವರಿದಿರುವ ಅಥವಾ ಮುಂದುವರಿಯುವ ಸರ್ಕಾರಿ ನೌಕರನಿಗೆ ಆ ಹುದ್ದೆಗೆ ನಿಗದಿಪಡಿಸಲಾದ ವೇತನ ಶ್ರೇಣಿಯಲ್ಲಿ ಅಥವಾ ಅವನು ಹೊಂದಿರುವ ಆಯ್ಕೆ ಕಾಲಿಕ ವೇತನ ಶ್ರೇಣಿಯಲ್ಲಿ ಅಥವಾ ಹಿರಿಯ ವೇತನ ಶ್ರೇಣಿಯಲ್ಲಿ, ಆಯಾ ಪ್ರಕರಣದನ್ವಯ, 2ನೇ ಹಾಗೂ 3ನೇ ಹೆಚ್ಚುವರಿ ವೇತನ ಬಡ್ತಿಯನ್ನು **ದಿನಾಂಕ 1ನೇ ಏಪ್ರಿಲ್ 2012 ರಿಂದ** ಜಾರಿಗೆ ಬರುವಂತೆ ಅಥವಾ 25/30 ವರ್ಷಗಳ ಸೇವೆ ಪೂರ್ಣಗೊಳಿಸಿದ ದಿನಾಂಕದಿಂದ ಇದರಲ್ಲಿ ಯಾವುದು ನಂತರವೋ, ಆ ದಿನಾಂಕದಿಂದ ಮಂಜೂರು ಮಾಡಲು ಆದೇಶಿಸಿರುತ್ತದೆ.

ದಿನಾಂಕ 14.06.2012 ರ ಆದೇಶದನ್ವಯ 2 ಮತ್ತು 3 ನೇ ಹೆಚ್ಚುವರಿ ವೇತನ ಬಡ್ತಿಯ ಮಂಜೂರಾತಿ ಉದ್ದೇಶಕ್ಕಾಗಿ ಸರ್ಕಾರಿ ನೌಕರನು ಇತರೆ ಷರತ್ತುಗಳೊಂದಿಗೆ ಮುಂಬಡ್ತಿಗೆ ನಿಗದಿಪಡಿಸಿದ ಅರ್ಹತೆಯನ್ನು ಹೊಂದಿರಬೇಕಾಗುತ್ತದೆ. ಅಂದರೆ ಆ ಹುದ್ದೆಗೆ ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆ ಮತ್ತು ಉನ್ನತ ಹುದ್ದೆಗೆ ಮುಂಬಡ್ತಿ ಹೊಂದಲು ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಸಹ ಸರ್ಕಾರಿ ನೌಕರನು ಉತ್ತೀರ್ಣರಾಗಿರಬೇಕಾಗುತ್ತದೆ.

ಮೀನುಗಾರಿಕೆ ಇಲಾಖೆಯ ಮೀನುಗಾರಿಕೆ ಕ್ಷೇತ್ರಪಾಲಕರುಗಳ ನೇಮಕಾತಿಗೆ ಏಳನೇ ತರಗತಿಯಲ್ಲಿ ಉತ್ತೀರ್ಣತೆಯನ್ನು ಕನಿಷ್ಠ ವಿದ್ಯಾರ್ಹತೆಯಾಗಿ ನಿಗದಿಪಡಿಸಲಾಗಿದ್ದು, ಕಡಿಮೆ ವಿದ್ಯಾರ್ಹತೆಯುಳ್ಳ ಈ ನೌಕರರು ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಅಸಮರ್ಥರಾಗಿರುತ್ತಾರೆ. ವಾರ್ಷಿಕ ವೇತನ ಬಡ್ತಿಗಳಿಸುವ ಉದ್ದೇಶಕ್ಕಾಗಿ ಇವರಿಗೆ ಕನ್ನಡ ಭಾಷಾ ಪರೀಕ್ಷೆ ಉತ್ತೀರ್ಣತೆಯಿಂದ ವಿನಾಯಿತಿ ನೀಡಲಾಗಿರುತ್ತದೆ. ಇದಲ್ಲದೆ ಈ ಹುದ್ದೆಯ ಕಾರ್ಯ ಮತ್ತು ಜವಾಬ್ದಾರಿಗಳು ಪರಿಚಾರಿಕೆ ಸ್ವರೂಪದ್ದಾಗಿದ್ದು, ಮೀನುಮರಿ ಉತ್ಪಾದನೆ, ಮೀನು ಪೋಷಣೆ ಮತ್ತು ಮೀನು ಸಾಕಣೆ, ಕೆರೆಗಳ ಕಾವಲು, ಉಸ್ತುವಾರಿ ಮುಂತಾದ ಕಾರ್ಯಗಳನ್ನು ಒಳಗೊಂಡಿರುತ್ತದೆ. ಈ ಕಾರಣಗಳಿಂದಾಗಿ ಮೀನುಗಾರಿಕೆ ಇಲಾಖೆಯ ಮೀನುಗಾರಿಕೆ ಕ್ಷೇತ್ರಪಾಲಕರಿಗೆ ಕಾಲಬದ್ಧ ಮುಂಬಡ್ತಿ, ಹಿರಿಯ ವೇತನ ಶ್ರೇಣಿ ಮತ್ತು 1 ನೇ ಹೆಚ್ಚುವರಿ ವೇತನ ಬಡ್ತಿ ಮಂಜೂರಾತಿಗೆ ಕೂಡ ಆ ಹುದ್ದೆಗೆ ನಿಗದಿಪಡಿಸಿದ ಕನ್ನಡ

ಭಾಷಾ ಪರೀಕ್ಷೆಯಲ್ಲಿ ಮತ್ತು ಮುಂಬಡ್ತಿ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ನೀಡಲಾಗಿರುವಂತೆಯೇ 2ನೇ ಮತ್ತು 3ನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಉದ್ದೇಶಕ್ಕಾಗಿ ಕೂಡ ಆ ಹುದ್ದೆಗೆ ನಿಗದಿಪಡಿಸಿರುವ ಕನ್ನಡ ಭಾಷಾ ಪರೀಕ್ಷೆ ಮತ್ತು ಮುಂಬಡ್ತಿ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳ ಉತ್ತೀರ್ಣತೆಯಿಂದ ವಿನಾಯಿತಿ ನೀಡುವಂತೆ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯು ಕೋರಿದೆ. ಸರ್ಕಾರವು ಈ ಕೋರಿಕೆಯನ್ನು ಪರಿಶೀಲಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ 29 ಎಸ್‌ಆರ್‌ಪಿ 2012,**
**ಬೆಂಗಳೂರು, ದಿನಾಂಕ:11.02.2013**

ಮೀನುಗಾರಿಕೆ ಇಲಾಖೆಯ ಮೀನುಗಾರಿಕೆ ಕ್ಷೇತ್ರಪಾಲಕರಿಗೆ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2012(VIII), ದಿ:14.06.2012 ರನ್ವಯ 25 ವರ್ಷಗಳ ಸೇವೆಗಾಗಿ 2 ನೇ ಹೆಚ್ಚುವರಿ ವೇತನ ಬಡ್ತಿ ಮತ್ತು 30 ವರ್ಷಗಳ ಸೇವೆಗಾಗಿ 3ನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಉದ್ದೇಶಕ್ಕಾಗಿ ಆ ಹುದ್ದೆಗೆ ನಿಗದಿಪಡಿಸಿರುವ ಕನ್ನಡ ಭಾಷಾ ಪರೀಕ್ಷೆ ಮತ್ತು ಮುಂಬಡ್ತಿ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳ ಉತ್ತೀರ್ಣತೆಗಾಗಿ ಒತ್ತಾಯಿಸುವ ಅಗತ್ಯವಿಲ್ಲವೆಂದು ಸರ್ಕಾರವು ಆದೇಶಿಸಿದೆ.

ಉಳಿದಂತೆ ದಿನಾಂಕ:14.06.2012 ರ ಆದೇಶದಲ್ಲಿನ ಇತರೆ ಷರತ್ತುಗಳು ಎಂದಿನಂತೆ ಅನ್ವಯಿಸತಕ್ಕದ್ದು.

ಈ ಆದೇಶವು ದಿನಾಂಕ ದಿ:01.04.2012 ರಿಂದ ಜಾರಿಗೆ ಬರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ.

ಇವರಿಗೆ,

1. ಮಹಾಲೇಖಪಾಲರು(ಲೆಕ್ಕಪತ್ರ/ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
3. ನಿರ್ದೇಶಕರು, ಮೀನುಗಾರಿಕೆ ಇಲಾಖೆ.
4. ಸಚಿವಾಲಯದ ಇಲಾಖೆಗಳು.
5. ಶಾಖಾ ರಕ್ಷ ಕಡತ.